ಈ ಯೋಜನೆಯ ಅನುಷ್ಠಾನಕ್ಕಾಗಿ ಕೇಂದ್ರ ಸರ್ಕಾರವು ಇಡುಗಂಟಾಗಿ ಅನುದಾನ ಬಿಡುಗಡೆ ಮಾಡುತ್ತಿದ್ದು, ಔಷಧಿಗಳ ಖರೀದಿಗಾಗಿ ಪ್ರತ್ಯೇಕವಾಗಿ ಅನುದಾನ ಬಿಡುಗಡೆ ಮಾಡುತ್ತಿಲ್ಲ. ಈ ರೀತಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದಿಂದ ರೂ.497.20 ಲಕ್ಷಗಳಷ್ಟು ಔಷಧಿಗಳನ್ನು ಖರೀದಿ ಮಾಡಲಾಗಿದೆ.

ಇ) ದೂರುಗಳು ಬಂದಿರುವುದಿಲ್ಲ.

ಗಂಗಾಕಲ್ಯಾಣ ಯೋಜನೆಯಲ್ಲಿ ಕೊಳವೆ ಬಾವಿ ಕೊರತೆ

534 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊಳವೆ ಬಾವಿ ಕೊರೆಯಲು ಎಷ್ಟು ಹಣ ನಿಗದಿಪಡಿಸಲಾಗಿದೆ.

ಆ) ಸದರಿ ಯೋಜನೆಗೆ ನಿಗದಿಪಡಿಸಿರುವ ಹಣದಿಂದ ಕೊಳವೆ ಬಾವಿ ಕೊರೆದು ವಿದ್ಯುತ್ ಸಂಪರ್ಕ ಪಡೆದು ಪಂಪ್‌ಸೆಟ್ ಅಳವಡಿಸಲು ಸಾಧ್ಯವೇ;

ಇ) ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಅಂತರ್ಜಲ ಸಾವಿರ ಅಡಿಗಳಷ್ಟು ಆಳಕ್ಕೆ ಇಳಿದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಯೋಜನೆಯಲ್ಲಿ ಘಟಕ ವೆಚ್ಚ ಹೆಚ್ಚಿಸುವ ಯೋಜನೆ ಸರಕಾರಕ್ಕೆ ಇದೆಯೇ?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಒಂದು ಕೊಳವೆ ಬಾವಿಗೆ ರೂ.86.000/– ಸಹಾಯಧನ ನೀಡಲಾಗುತ್ತಿದೆ. ಇದಕ್ಕೆ ಹೆಚ್ಚಿನ ಹಣ ಬೇಕಾದಲ್ಲಿ ಸಾಲ ರೂಪದಲ್ಲಿ ನೀಡಲಾಗುವುದು. ಘಟಕ ವೆಚ್ಚ ಮಿತಿಯನ್ನು ಸಡಿಲಿಸಲಾಗಿದೆ.

ಆ) ಹೌದು

ಇ) ಹೌದು

ಈ) ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆದು ಪಂಪ್ ಸೆಟ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ನಿಗದಿಪಡಿಸಲಾಗಿದ್ದ ಘಟಕ ವೆಚ್ಚ ರೂ.1.00 ಲಕ್ಷ ಮಿತಿಯನ್ನು ತೆಗೆದುಹಾಕಿ. ಮುಕ್ತ ಹರಾಜಿನಲ್ಲಿ ಬಿಡ್ಸ್ ಮುಖಾಂತರ ಸ್ವೀಕರಿಸುವ ದರಗಳನ್ನು ಪರಿಗಣಿಸಿ ಟರ್ನ್ ಕೀ

ಆಧಾರದಲ್ಲಿ ಕೊಳವೆ ಬಾವಿ ಕೊರೆದು, ಪಂಪು ಮೋಟಾರು ಅಳವಡಿಸಿ, ವಿದ್ಯುದ್ದೀಕರಣಗೊಳಿಸಲು ಕ್ರಮ ಕೈಗೊಂಡಿದೆ.

521 ಶ್ರೀ ಶಿವಲಿಂಗೇಗೌಡ ಕೆ.ಎಂ. : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ತ್ರೀಶಕ್ತಿ ಮತ್ತು ಸ್ವಸಹಾಯ ಸಂಘಗಳ ಮುಖಾಂತರ ಪೌಷ್ಟಿಕ ಆಹಾರವನ್ನು ತಯಾರಿಸಿ ಸರಬರಾಜು ಮಾಡುವ ಬಗ್ಗೆ ನ್ಯಾಯಾಲಯದಲ್ಲಿ ಆದೇಶ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) :

ಅ) ಬಂದಿದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 7–10–2006ರ ಆದೇಶದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಆಹಾರ ಸರಬರಾಜಿಗೆ ಗುತ್ತಿಗೆದಾರರನ್ನು ಬಳಸಬಾರದೆಂದು ಹಾಗೂ ಆಹಾರ ಸಾಮಗ್ರಿಗಳನ್ನು ಖರೀದಿಸಲು ಮತ್ತು ಸಿದ್ಧಪಡಿಸಲು ಗ್ರಾಮ ಸಮುದಾಯ, ಸ್ವಸಹಾಯ ಗುಂಪುಗಳು ಹಾಗೂ ಮಹಿಳಾ ಮಂಡಳಗಳನ್ನು ಬಳಸಿಕೊಳ್ಳ ಬೇಕೆಂದು ಆದೇಶಿಸಿರುತ್ತದೆ.

ಆ) ಅದರಂತೆ ರಾಜ್ಯದಲ್ಲಿ 176 ತಾಲ್ಲೂಕುಗಳನ್ನೊಳಗೊಂಡಂತೆ 137 ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ. ಪ್ರತೀ ಘಟಕಗಳಲ್ಲಿ ಸ್ಥಳೀಯ ಹಾಗೂ ಸ್ವಸಹಾಯ ಗುಂಪುಗಳ 22–32 ಮಹಿಳೆಯರನ್ನು ಆಯ್ಕೆಮಾಡಲಾಗಿದೆ. ಇವರಿಗೆ ಆಹಾರ ತಯಾರಿಕೆ ಬಗ್ಗೆ ತರಬೇತಿ, ಯಂತ್ರೋಪಕರಣಗಳನ್ನು ಸಜ್ಜುಗೊಳಿಸು ವುದು, ಆಹಾರದ ಗುಣಮಟ್ಟವನ್ನು ಕಾಪಾಡುವ ಬಗ್ಗೆ ಹಾಗೂ ಆರ್ಥಿಕ ಸಹಾಯ ನೀಡಲು ಟೆಂಡರ್ ಮೂಲಕ ಬಲಸಂವರ್ಧಕರನ್ನು ಗುರುತಿಸಲಾಗಿ ರುತ್ತದೆ. ಸದರಿ ಬಲಸಂವರ್ಧಕರು ಮಹಿಳಾ ಪೂರಕ ಪೌಷ್ಟಿಕ ಆಹಾರ ಉತ್ಪಾದನಾ ಹಾಗೂ ತರಬೇತಿ ಘಕಟಗಳನ್ನು ಸ್ಥಾಪಿಸುವುದರೊಂದಿಗೆ ಆಹಾರ ತಯಾರಿಕೆ ಮತ್ತು ಗುಣಮಟ್ಟವನ್ನು ಕಾಪಾಡುವ ಬಗ್ಗೆ ತರಬೇತಿ ದಂಡಗಳನ್ವಯ ಗುಣಮಟ್ಟದ ಆಹಾರ ಪದಾರ್ಥಗಳನ್ನು ಸಿದ್ಧಪಡಿಸ ಲಾಗುತ್ತಿದೆ.